# ಕರ್ನಾಟಕ ಸರ್ಕಾರ

ಸಂಖ್ಯೆ: ಕೌಉಜೀಇ 88 ಕೌಗುಸೇ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 13-11-2018

## ಸುತ್ತೋಲೆ

**ವಿಷಯ:** ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆ 2018-19ನೇ ಸಾಲಿನ ಕ್ರಿಯಾ ಯೋಜನೆಯ ಅನುಷ್ಠಾನಗೊಳಿಸುವ ಕುರಿತು ಅನುಮೋದನೆ.

**ಉಲ್ಲೇಖ:**
1. ಕೌಉಜೀಇ 152 ಕೈತಇ 2017, ದಿನಾಂಕ: 08-05-2017.
2. ತಿದ್ದುಪಡಿ ಆದೇಶ ಸಂಖ್ಯೆ: ಕೌಉಜೀಇ 152 ಕೈತಇ 2017, ದಿನಾಂಕ: 22-11-2017.
3. ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 51 ಕೌಗುಇ 2018, ದಿನಾಂಕ: 10-11-2018.
4. ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 248 ಕೈತಇ 2017, ದಿನಾಂಕ: 14-08-2017.

* * * * *

ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಯಡಿಯಲ್ಲಿ 2018-19ನೇ ಸಾಲಿನಲ್ಲಿ 251200 ಯುವಕ ಮತ್ತು ಯುವತಿಯರಿಗೆ ಕೌಶಲ್ಯ ತರಬೇತಿಯನ್ನು ನೀಡಿ ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಶೇ.70 ರಷ್ಟು ಜನರಿಗೆ ಉದ್ಯೋಗ ನಿಯುಕ್ತಿ / ಸ್ವಯಂ ಉದ್ಯೋಗ ಒದಗಿಸಬೇಕಾಗಿದೆ. ಈ ಯೋಜನೆಯ ಫಲಾನುಭವಿಗಳಲ್ಲಿ ಪರಿಶಿಷ್ಟ ಜಾತಿಯವರಿಗೆ ಶೇ.20 ರಷ್ಟು ಪರಿಶಿಷ್ಟ ಪಂಗಡದವರಿಗೆ ಶೇ.7 ರಷ್ಟು ಅಲ್ಪ ಸಂಖ್ಯಾತರಿಗೆ ಶೇ.15 ರಷ್ಟು ಹಾಗೂ ವಿಶೇಷ ಚೇತನರಿಗೆ ಶೇ.5 ರಷ್ಟು ಮತ್ತು ಮಹಿಳೆಯರಿಗೆ ಶೇ.33 ರಷ್ಟು ತರಬೇತಿಗಳನ್ನು ನೀಡಲು ನಿಗಧಿಪಡಿಸಿದೆ. ಉಲ್ಲೇಖದಲ್ಲಿ ನಮೂದಿಸಲಾದ ಸರ್ಕಾರಿ ಆದೇಶದನ್ವಯ ಜಿಲ್ಲಾಧಿಕಾರಿಗಳಿಗೆ ತರಬೇತಿ ಪ್ರಸ್ತಾವನೆಗಳಿಗೆ ರೂ. 1.00 ಕೋಟಿವರೆಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ಈ ಅಧಿಕಾರವನ್ನು ಚಲಾಯಿಸಿ ಜಿಲ್ಲಾಧಿಕಾರಿಗಳು ಪ್ರಸ್ತಾವನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಅಧಿಕಾರಯುಕ್ತ ಸಮಿತಿ ಅನುಮೋದನೆ ಪಡೆಯಲು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ಕಳುಹಿಸುವುದು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಯ ಅನುಷ್ಠಾನಕ್ಕಾಗಿ ಉಲ್ಲೇಖ(3) ರಲ್ಲಿ ಹೊರಡಿಸಲಾದ ಮಾರ್ಗಸೂಚಿಗಳನುಸಾರ ಫಲಾನುಭವಿಗಳ ಆಯ್ಕೆಯನ್ನು www.kaushalkar.com ನಿಂದ ಮಾಡಬೇಕಾಗಿದೆ. ಹೊಸ ಫಲಾನುಭವಿಗಳು ತರಬೇತಿ ಬಯಸಿದಲ್ಲಿ ಇವರುಗಳಿಗೆ www.kaushalkar.com ನಲ್ಲಿ ನೋಂದಾಯಿಸಲು ಕಡ್ಡಾಯವಾಗಿದೆ. ಮುಂದುವರೆದು

ಜಿಲ್ಲೆಯಲ್ಲಿನ ವೃತ್ತಿ ತರಬೇತಿ ಸಂಸ್ಥೆಗಳು / ಕೇಂದ್ರಗಳು ಇಲಾಖೆಯಿಂದ ಮಾನ್ಯತೆ ಪಡೆಯುವುದು ಸಹ ಕಡ್ಡಾಯವಾಗಿದೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಮಾನ್ಯತೆ ಪಡೆದ ಜಿಲ್ಲಾವಾರು / ತಾಲ್ಲೂಕುವಾರು ತರಬೇತಿ ಸಂಸ್ಥೆಗಳ / ಕೇಂದ್ರಗಳ ಪಟ್ಟಿ, ವರ್ಗವಾರು/ ವಲಯವಾರು ಉದ್ಯೋಗಾಕಾಂಕ್ಷಿಗಳ ಮಾಹಿತಿಯನ್ನು ಈ ಸುತ್ತೋಲೆಯ **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ. ಇದಲ್ಲದೇ ತರಬೇತಿ ನೀಡುವಾಗ www.kaushalkar.com ನಲ್ಲಿ ನೋಂದಾಯಿಸಿ ಈಗಾಗಲೇ ದೂರವಾಣಿ ಸಮಾಲೋಚನೆಗೊಳಪಡಿಸಿದ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡುವುದು. ತರಬೇತಿ ಮೌಲ್ಯಮಾಪನ, ಪ್ರಮಾಣೀಕರಣ ಮತ್ತು ಉದ್ಯೋಗ ನಿಯುಕ್ತಿ ಅಭ್ಯರ್ಥಿಗಳಿಗೆ ಉದ್ಯೋಗ / ಸ್ವಯಂ ಉದ್ಯೋಗ ಹೊಂದುವಂತೆ ಕ್ರಮವಹಿಸುವುದು.

ಉಲ್ಲೇಖ (1) ಮತ್ತು (2) ರಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಚಟುವಟಿಕೆಗಳ ಮೇಲ್ವಿಚಾರಣೆ ಮತ್ತು ನಿರ್ದೇಶನಗಳನ್ನು ನೀಡಲು ರಾಜ್ಯಮಟ್ಟದಲ್ಲಿ ಕರ್ನಾಟಕ ಕೌಶಲ್ಯ ಮಿಷನ್, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಕೌಶಲ್ಯ ಮಿಷನ್, ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಕೌಶಲ್ಯ ಮಿಷನ್‌ಗಳನ್ನು ರಚಿಸಲಾಗಿದ್ದು, ಈ ಮಿಷನ್‌ಗಳು ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಯ / ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ-2.0 (ಕೇಂದ್ರ ಪುರಸ್ಕೃತ ಹಾಗೂ ರಾಜ್ಯ ನಿರ್ವಹಣೆ) ಪರಿಣಾಮಕಾರಿ ಅನುಷ್ಠಾನವನ್ನು ಕೈಗೊಳ್ಳುವುದು.

ಪ್ರಸಕ್ತ ವರ್ಷದಲ್ಲಿ ಒಟ್ಟಾರೆ 251200 ಫಲಾನುಭವಿಗಳಿಗೆ ತರಬೇತಿ ಕೈಗೊಳ್ಳಬೇಕಾಗಿದ್ದು, ಇದರ ಪೈಕಿ ಇಲಾಖಾವಾರು ವಾರ್ಷಿಕ / ಮಾಸಿಕ ಆರ್ಥಿಕ ಮತ್ತು ಭೌತಿಕ ಗುರಿಗಳನ್ನು ಈ ಸುತ್ತೋಲೆಯ **ಅನುಬಂಧ-1** ರಲ್ಲಿ ನೀಡಲಾಗಿದೆ. ಇದಲ್ಲದೇ, ಯೋಜನೆ ಅನುಷ್ಠಾನ ಹಾಗೂ ಪರಿಶೀಲನೆ ನಮೂನೆಯನ್ನು **ಅನುಬಂಧ-3** ರಲ್ಲಿ ನೀಡಲಾಗಿದೆ. ಇದರನ್ವಯ ಅನುಷ್ಠಾನವನ್ನು ಕೈಗೊಂಡು ಪ್ರತಿ ತಿಂಗಳು 10 ನೇ ತಾರೀಖಿನೊಳಗೆ ಸಾಧಿಸಿದ ಪ್ರಗತಿಯನ್ನು **ಅನುಬಂಧ-4** ರಲ್ಲಿ ನಿಗದಿ ಪಡಿಸಿದ ನಮೂನೆಯಲ್ಲಿ ನಿರ್ದೇಶಕರು, ಕೌಶಲ್ಯ ಮಿಷನ್ ರವರಿಗೆ ಹಾಗೂ ಸರ್ಕಾರಕ್ಕೆ ತಪ್ಪದೇ ಮಿಂಚಂಚೆ (E-mail) ಹಾಗೂ ಹಾರ್ಡ್ ಪ್ರತಿ ಕಳುಹಿಸುವುದು.

ಈ ಗುರಿಗಳ ಪೈಕಿ **ಅನುಬಂಧ-1** ರ ಕ್ರಮ ಸಂಖ್ಯೆ-8 ರಲ್ಲಿನ ಶ್ರಮ ಸಾಮರ್ಥ್ಯ, ಶ್ರಮ ಸಂಸಾರ ಸಾಮರ್ಥ್ಯ ಮತ್ತು ಕೈಗಾರಿಕಾ ಸುರಕ್ಷತಾ ತರಬೇತಿ ಕಾರ್ಯಕ್ರಮಗಳಿಗೆ ಬೇಕಾಗುವ ರೂ.6787.85 ಲಕ್ಷ ಮೊತ್ತವನ್ನು ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕೌಶಲ್ಯ ಅಭಿವೃದ್ಧಿ ಇಲಾಖೆಗೆ ಬಿಡುಗಡೆಗೊಳಿಸುವುದು.

ಮುಂದುವರೆದು, **ಅನುಬಂಧ-1** ರ ಕ್ರಮ ಸಂಖ್ಯೆ-2 ರಲ್ಲಿ Aspirational ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ನಿಗದಿಪಡಿಸಿದ ರೂ.846.00 ಲಕ್ಷಗಳಿಗೆ ಕೇಂದ್ರ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ ಹಾಗೂ ಕ್ರಮ ಸಂಖ್ಯೆ-3ರಲ್ಲಿನ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ Comprehensive Environment Plan for the Mining Impact Zone ರೂ. 1720.20 ಲಕ್ಷ ಮೊತ್ತದ ಕಾರ್ಯಕ್ರಮಕ್ಕೆ ಚಿತ್ರದುರ್ಗ, ಬಳ್ಳಾರಿ ಮತ್ತು

ತುಮಕೂರು ಜಿಲ್ಲೆಗಳಲ್ಲಿನ ಜಿ.ಟಿ.ಟಿ.ಸಿ ಹಾಗೂ ಐ.ಟಿ.ಐ.ಗಳ ಮೂಲಕ ಕೈಗೊಳ್ಳುವುದು. ಈ ಕಾರ್ಯಕ್ರಮಕ್ಕೆ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ.

ಸದರಿ ಜಿಲ್ಲಾವಾರು ಗುರಿಗಳನ್ನು ಎಲ್ಲಾ ಜಿಲ್ಲೆಯ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಜಿಲ್ಲಾ / ತಾಲ್ಲೂಕು ಮಟ್ಟದಲ್ಲಿ ನಡೆಯುವ ಮಾಸಿಕ ಹಾಗೂ ತ್ರೈಮಾಸಿಕ ಸಭೆಗಳಲ್ಲಿ ಪ್ರಗತಿ ಪರಿಶೀಲನೆಗೊಳಪಡಿಸಿ ಎಲ್ಲಾ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಸೂಚಿಸಲಾಗಿದೆ.

(ಈರಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ,

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ– ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ಒದಗಿಸಲು.
2. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್ಎ) ಕರ್ನಾಟಕ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು.
4. ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿ.ಆ.ಸು.ಇಲಾಖೆ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಎಲ್ಲಾ ಇಲಾಖೆಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ.
10. ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
12. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ.
13. ನಿರ್ದೇಶಕರು, ಕೌಶಲ್ಯ ಮಿಷನ್, ಭನ್ನೇರುಘಟ್ಟ ರಸ್ತೆ, ಬೆಂಗಳೂರು.
14. ವ್ಯವಸ್ಥಾಪಕ, ನಿರ್ದೇಶಕರು, ಜಿ.ಟಿ.ಟಿ.ಸಿ., ಬೆಂಗಳೂರು.

15. ವ್ಯವಸ್ಥಾಪಕ, ನಿರ್ದೇಶಕರು, ಕೆ.ವಿ.ಟಿ.ಎಸ್.ಡಿ.ಸಿ., ಭನ್ನೇರುಘಟ್ಟ ರಸ್ತೆ, ಬೆಂಗಳೂರು.
16. ನಿರ್ದೇಶಕರು, ಸಿಡಾಕ್, ಧಾರವಾಡ.
17. ಮಿಷನ್ ನಿರ್ದೇಶಕರು, ಎನ್.ಆರ್.ಎಲ್.ಎಂ., ಬೆಂಗಳೂರು.
18. ಮಿಷನ್ ನಿರ್ದೇಶಕರು, ಡೇ-ನಲ್ಮ್.
19. ಎಲ್ಲಾ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು.
20. ಎಲ್ಲಾ ಇಲಾಖೆಗಳ ಮುಖ್ಯಸ್ಥರು.
21. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
22. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು.
23. ಎಲ್ಲಾ ಜಿಲ್ಲೆಗಳ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು.
24. ಎಲ್ಲಾ ತಾಲ್ಲೂಕುಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು.
25. ಎಲ್ಲಾ ಮುಖ್ಯಾಧಿಕಾರಿಗಳು / ಆಯುಕ್ತರು, ಮಹಾನಗರ ಸಭೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಎನ್.ಎ.ಸಿ.
26. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.
27. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ರವರ ಆಪ್ತ ಕಾರ್ಯದರ್ಶಿಯವರಿಗೆ.
28. ರಕ್ಷಾ ಕಡತ / ಹೆಚ್ಚುವರಿ ಪ್ರತಿ.